# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 739 (905) |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | 15-12-2025 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ 32 ಖಾಸಗಿ ಹಾಗೂ ಅನುದಾನಿತ ಸರ್ಕಾರಿ ಪದವಿ ಪೂರ್ವ ಕಾಲೇಜು ಮಹಾ ವಿದ್ಯಾಲಯಗಳಿದ್ದು, ತೇರ್ಗಡೆ ಹೊಂದಿರುವ ತಾಲ್ಲೂಕಿನ ವಿದ್ಯಾರ್ಥಿಗಳು ತಾಂತ್ರಿಕ ಶಿಕ್ಷಣಕ್ಕಾಗಿ 90-100 ಕಿ.ಮೀ. ದೂರದ ರಾಯಚೂರು ಹಾಗೂ ಕೊಪ್ಪಳ ನಗರಕ್ಕೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮವೇನು: | ಹೌದು. ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ.<br><br>ಪ್ರಸ್ತುತ ಸಿಂಧನೂರು ತಾಲ್ಲೂಕಿಗೆ ಸಮೀಪದಲ್ಲಿ ಈ ಕೆಳಕಂಡ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿರುತ್ತವೆ.<br><br>1. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ<br>2. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ<br>3. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಯಚೂರು<br>4. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೊಪ್ಪಳ |
| (ಆ) | ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿನಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? | ಗಾಂಗಾವತಿಯ ಕಾಲೇಜನ್ನು ಹೊರತುಪಡಿಸಿ ಉಳಿದೆಲ್ಲಾ ಸಂಸ್ಥೆಗಳಲ್ಲಿ ವಿದ್ಯಾರ್ಥಿನಿಲಯದ ಸೌಲಭ್ಯ ಹೊಂದಿದ್ದು, ಪ್ರಸ್ತುತ ಸದರಿ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಉಠೋಪಚಾರಗಳನ್ನು ಒದಗಿಸುವ ಉದ್ದೇಶದಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಗಳಿಗೆ ಹಸ್ತಾಂತರಿಸಲು ಕ್ರಮವಹಿಸಲಾಗುತ್ತಿದೆ.<br><br>ಈ ಹಿನ್ನೆಲೆಯಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ನೂತನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |

ಕಡತ ಸಂಖ್ಯೆ: ಇಡಿ 159 ಹೆಚ್‌ಪಿಟಿ 2025

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು